# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1925** |
| ಮಾನ್ಯ ಸದಸ್ಯರ ಹೆಸರು | : | **ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನಸಭಾ ಕ್ಷೇತ್ರ)** |
| ಉತ್ತರಿಸುವ ದಿನಾಂಕ | : | **24.03.2026** |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ದಿಮೆಗಳ ಸಚಿವರು. |

| ಕ್ರ. ಸಂ: | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ಕರಾವಳಿಯಲ್ಲಿ ವಿಶೇಷವಾಗಿ ಗುರುತಿಸಿಕೊಂಡಿರುವ ಹೆಂಚು ಉದ್ಯಮ ಪ್ರಸ್ತುತ ದಿನಮಾನದಲ್ಲಿ ಭಾರಿ ಕುಸಿತ ಕಂಡಿರುವುದರಿಂದ, ಮಾಲೀಕರು ತೀವ್ರ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಇಲ್ಲ. |
| (ಆ) | ರಾಜ್ಯದ ಉಡುಪಿ ಹಾಗೂ ಮಂಗಳೂರು ಜಿಲ್ಲೆಯಲ್ಲಿ ವಿಶೇಷವಾಗಿ ಆವೆ ಮಣ್ಣಿನ ಹೆಂಚು ನಿರ್ಮಾಣಗೊಳ್ಳುತ್ತಿದ್ದು, ಸದರಿ ಹೆಂಚುಗಳ ಖರೀದಿ ಕ್ಷೀಣಿಸುವುದರ ಜೊತೆಗೆ ಕಚ್ಚಾ ವಸ್ತುಗಳ ಅಲಭ್ಯತೆ, ದರ ಏರಿಕೆ, ಕಚ್ಚಾ ವಸ್ತುಗಳಿಗೆ ಇನ್ ಪುಟ್ ಕ್ಲೈಮ್ ಇಲ್ಲದಿರುವುದು, ಆವೆ ಮಣ್ಣು ದರ ಹೆಚ್ಚಳ ಹಾಗೂ ಇನ್ನೂ ಮುಂತಾದ ಸಮಸ್ಯೆಗಳಿಂದ ಈ ವ್ಯಾಪ್ತಿಯಲ್ಲಿನ ಹೆಂಚಿನ ಕಾರ್ಖಾನೆಗಳು ಮುಚ್ಚುವ ಹಂತ ತಲುಪಿದ್ದು ಇದನ್ನು ತಪ್ಪಿಸಲು ಸರ್ಕಾರ ಇದುವರೆಗೆ ತೆಗೆದುಕೊಂಡ ಕ್ರಮವೇನು; | 1. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 27 ಹೆಂಚಿನ ಉದ್ಯಮ ಕಾರ್ಖಾನೆಗಳು ಈ ಹಿಂದೆ ಸ್ಥಾಪನೆಯಾಗಿದ್ದು, ಪ್ರಸ್ತುತ ಜಿಲ್ಲೆಯಲ್ಲಿ 8 ಕಾರ್ಖಾನೆಗಳು ಮಾತ್ರ ಕಾರ್ಯ ನಿರ್ವಹಿಸುತ್ತಿವೆ.<br>2. ಉತ್ತರ ಕನ್ನಡ ಜಿಲ್ಲೆಯಲ್ಲಿ ಒಟ್ಟು 16 ಹೆಂಚಿನ ಉದ್ಯಮ ಕಾರ್ಖಾನೆಗಳು ಈ ಹಿಂದೆ ಸ್ಥಾಪನೆಯಾಗಿದ್ದು, ಪ್ರಸ್ತುತ ಜಿಲ್ಲೆಯಲ್ಲಿ ಎಲ್ಲಾ ಕಾರ್ಖಾನೆಗಳು ಮುಚ್ಚಲ್ಪಟ್ಟಿವೆ.<br>3. ಉಡುಪಿ ಜಿಲ್ಲೆಯಲ್ಲಿ ಒಟ್ಟು 32 ಹೆಂಚಿನ ಉದ್ಯಮ ಕಾರ್ಖಾನೆಗಳು ಈ ಹಿಂದೆ ಸ್ಥಾಪನೆಯಾಗಿದ್ದು, ಪ್ರಸ್ತುತ ಜಿಲ್ಲೆಯಲ್ಲಿ 10 ಕಾರ್ಖಾನೆಗಳು ಮಾತ್ರ ಕಾರ್ಯ ನಿರ್ವಹಿಸುತ್ತಿವೆ.<br><br>ಮುಚ್ಚಲ್ಪಟ್ಟ ಕಾರ್ಖಾನೆಗಳ ಜಾಗದಲ್ಲಿ ಇತರೇ ವಾಣಿಜ್ಯ / ಪ್ರವಾಸೋದ್ಯಮ ಚಟುವಟಿಕೆಗಳು ಪ್ರಾರಂಭವಾಗಿವೆ. ಕಾರ್ಯ ನಿರ್ವಹಿಸುತ್ತಿರುವ ಕಾರ್ಖಾನೆಗಳು ಹೆಂಚಿನ ಜೊತೆಗೆ ಬ್ರಿಕ್ಸ್ ಮುಂತಾದ ಉತ್ಪನ್ನಗಳನ್ನು ಸಹ ತಯಾರಿಸುತ್ತಿವೆ. |

| | | |
|---|---|---|
| (ಇ) | ಕಳೆದ ಮೂರು ವರ್ಷಗಳಲ್ಲಿ ಹೆಂಚು ಉದ್ಯಮದ ಪುನಶ್ಚೇತನ, ಅಭಿವೃದ್ಧಿ ಹಾಗೂ ವಿಸ್ತರಣೆಗೆ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು; ಹಾಗೂ ವಿನಿಯೋಗಿಸಿರುವ ಅನುದಾನದ ವಿವರಗಳೇನು; | ಕೈಗಾರಿಕಾ ನೀತಿ 2025-30 ರ ಪ್ರಕಾರ ಹೊಸ, ವೈವಿದ್ಯೀಕರಣ ಮತ್ತು ಆಧುನೀಕರಣ ಕೈಗಾರಿಕಾ ಚಟುವಟಿಕೆಗಳಿಗೆ ವಿವಿಧ ಪ್ರೋತ್ಸಾಹನೆಗಳನ್ನು ನೀಡಲಾಗುತ್ತಿದೆ. ಆದರೆ ಹಾಲಿಯಿರುವ ಘಟಕಗಳ ಪುನಶ್ಚೇತನಕ್ಕೆ ಯಾವುದೇ ಪ್ರೋತ್ಸಾಹನೆಗಳು ಲಭ್ಯವಿರುವುದಿಲ್ಲ. |
| (ಈ) | ಕರ್ನಾಟಕ ಕರಾವಳಿಯಲ್ಲಿ ವಿಶೇಷವಾಗಿ ಗುರುತಿಸಿಕೊಂಡಿರುವ ಹಾಗೂ ಪ್ರಸ್ತುತ ತೀವ್ರ ಸಂಕಷ್ಟದಲ್ಲಿರುವ ಹೆಂಚು ಉದ್ಯಮವನ್ನು ಉಳಿಸಿ, ಬೆಳೆಸಬೇಕಾದ ಅನಿವಾರ್ಯತೆ ಇದ್ದು, ಆ ನಿಟ್ಟಿನಲ್ಲಿ ಹೆಂಚಿನ ಕಾರ್ಖಾನೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹಾಗೂ ಹೆಂಚು ಉದ್ಯಮಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? (ವಿವರ ನೀಡುವುದು) | ಹೆಂಚು ಉದ್ಯಮವು ಒಳಗೊಂಡಂತೆ ಕೈಗಾರಿಕೆಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೈಗಾರಿಕಾ ನೀತಿ 2025-30ನ್ನು ಸರ್ಕಾರವು ಜಾರಿಗೆ ತಂದಿರುತ್ತದೆ. ವಿವರಗಳು ಈ ಕೆಳಕಂಡಂತಿವೆ.<br>1. ಬಂಡವಾಳ ಹೂಡಿಕೆ ಸಹಾಯಧನ / ವಹಿವಾಟು ಆಧಾರಿತ ಹೂಡಿಕೆ ಸಹಾಯಧನ.<br>2. ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ನೋಂದಣಿ ಶುಲ್ಕ ವಿನಾಯಿತಿ.<br>3. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>4. ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ.<br>5. ವಿದ್ಯುತ್ ಚ್ಛಕ್ತಿ ಸಹಾಯಧನ.<br>6. ತಂತ್ರಜ್ಞಾನ ಅಳವಡಿಕೆ & ನವೋನ್ವೇಶಣೆ ಉತ್ತೇಜನ<br>7. ರಫ್ತು ಘಟಕಗಳಿಗೆ ಪ್ರೋತ್ಸಾಹ.<br>8. ಸುಸ್ಥಿರತೆ ಮತ್ತು ಜವಾಬ್ದಾರಿಯುತ ಕೈಗಾರೀಕರಣ ಉತ್ತೇಜನ<br>9. ಲಾಜಿಸ್ಟಿಕ್ಸ್ ಮತ್ತು ಉಗ್ರಾಣ ಸಹಾಯಧನ |

**ಸಿಐ 53 ಎಸ್‌ಎಸ್‌ಐ 2026**

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು